**All India Radio: Bangalore**
**National Bulletin In Kannada**
**12.02.2025 19.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ಫ್ರಾನ್ಸ್‌ನ ಮಾರ್ಸಿಲ್ಲೆಯಲ್ಲಿ ಭಾರತದ ಮೊದಲ ದೂತವಾಸ ಕಚೇರಿ ಉದ್ಘಾಟಿಸಿದ ಪ್ರಧಾನಿ ನರೇಂದ್ರ ಮೋದಿ
2. ಮಹಾಕುಂಭಮೇಳ: ಮಾಘ ಪೂರ್ಣಿಮೆ ದಿನವಾದ ಇಂದು ತ್ರಿವೇಣಿ ಸಂಗಮದಲ್ಲಿ ಲಕ್ಷಾಂತರ ಭಕ್ತರಿಂದ ಪವಿತ್ರ ಸ್ನಾನ
3. ಉತ್ತರ ಪ್ರದೇಶದಲ್ಲಿ ದೇಶದ ಅತಿದೊಡ್ಡ ಜಾಗತಿಕ ಜವಳಿ ಸಮಾವೇಶ 'ಭಾರತ್ ಟೆಕ್ಸ್-೨೦೨೫'ಕ್ಕೆ ಕೇಂದ್ರ ಸಚಿವ ಗಿರಿರಾಜ್ ಸಿಂಗ್ ಚಾಲನೆ
4. ಏಕದಿನ ಕ್ರಿಕೆಟ್: ಇಂಗ್ಲೆಂಡ್‌ಗೆ ೩೫೭ ರನ್‌ಗಳ ಬೃಹತ್ ಗುರಿ ನೀಡಿದ ಭಾರತ

<><><><>

ಫ್ರಾನ್ಸ್‌ನ ಐತಿಹಾಸಿಕ ನಗರ ಮಾರ್ಸಿಲ್ಲೆಯಲ್ಲಿ ಇಂದು ಭಾರತದ ಮೊದಲ ದೂತವಾಸ ಕಚೇರಿಯನ್ನು ಪ್ರಧಾನಿ ನರೇಂದ್ರ ಮೋದಿ ಮತ್ತು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯಲ್ ಮ್ಯಾಕ್ರನ್ ಜಂಟಿಯಾಗಿ ಉದ್ಘಾಟಿಸಿದರು. ಇದಕ್ಕೂ ಮುನ್ನ ಉಭಯ ನಾಯಕರು ಅನಿವಾಸಿ ಭಾರತೀಯ ಸಮುದಾಯದ ಸದಸ್ಯರೊಂದಿಗೆ ಸಂವಾದ ನಡೆಸಿದರು. ಬಳಿಕ, ಕ್ಯಾಡರಾಚೆಯಲ್ಲಿರುವ ಅಂತಾರಾಷ್ಟ್ರೀಯ ಥರ್ಮೋನ್ಯೂಕ್ಲಿಯಾರ್ ಪ್ರಾಯೋಗಿಕ ರಿಯಾಕ್ಟರ್ - ಐಟಿಇಆರ್‌ಗೆ ಭೇಟಿ ನೀಡಿದರು. ನಂತರ ಮರ್ಜಲ್ಸ್ ಯುದ್ಧ ಸ್ಮಾರಕಕ್ಕೆ ತೆರಳಿ, ಮೊದಲನೇ ಮತ್ತು ೨ನೇ ಮಹಾ ಯುದ್ಧದಲ್ಲಿ ಪ್ರಾಣ ತ್ಯಾಗ ಮಾಡಿದ ಭಾರತೀಯ ಸೈನಿಕರಿಗೆ ಗೌರವ ನಮನ ಸಲ್ಲಿಸಿದರು. ಬಳಿಕ, ಪ್ರಧಾನಿ ನರೇಂದ್ರ ಮೋದಿ ಮತ್ತು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯಲ್ ಮ್ಯಾಕ್ರನ್, ಭಾರತ-ಫ್ರಾನ್ಸ್ ಕಾರ್ಯತಂತ್ರದ ಪಾಲುದಾರಿಕೆಯ ವಿವಿಧ ಅಂಶಗಳ ಕುರಿತು ಚರ್ಚಿಸಿದರು. ರಕ್ಷಣೆ, ನಾಗರಿಕ ಪರಮಾಣು ಶಕ್ತಿ ಮತ್ತು ಬಾಹ್ಯಾಕಾಶದ ಕಾರ್ಯತಂತ್ರ ಕ್ಷೇತ್ರಗಳಲ್ಲಿನ ಪರಸ್ಪರ ಸಹಕಾರ ಕುರಿತ ಪ್ರಗತಿಯನ್ನು ಪರಿಶೀಲಿಸಿದರು. ತಂತ್ರಜ್ಞಾನ ಮತ್ತು ನಾವೀನ್ಯತೆ ಕ್ಷೇತ್ರಗಳಲ್ಲಿ ಉಭಯ ದೇಶಗಳ

ನಡುವಿನ ಸಹಯೋಗವನ್ನು ಬಲಪಡಿಸುವ ಕುರಿತು ಚರ್ಚಿಸಿದರು. ಉಭಯ ನಾಯಕರ ಭೇಟಿ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ, ಯುರೋಪ್, ಪಶ್ಚಿಮ ಏಷ್ಯಾ ಮತ್ತು ಇಂಡೋ-ಪೆಸಿಫಿಕ್‌ನಲ್ಲಿನ ಇತ್ತೀಚಿನ ಭೌಗೋಳಿಕ ರಾಜಕೀಯ ಬೆಳವಣಿಗೆಗಳ ಕುರಿತು ಉಭಯ ನಾಯಕರು ತಮ್ಮ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಇದೇ ವೇಳೆ ಜಾಗತಿಕ ಮತ್ತು ಪ್ರಾದೇಶಿಕ ಪ್ರಾಮುಖ್ಯತೆಯ ಹಲವಾರು ವಿಚಾರಗಳ ಕುರಿತು ಇಬ್ಬರು ನಾಯಕರು ಚರ್ಚಿಸಿದರು ಎಂದು ಹೇಳಿದ್ದಾರೆ. ಪ್ಯಾರಿಸ್‌ನಿಂದ ಮಾರ್ಸಿಲ್ಲೆಗೆ ಫ್ರಾನ್ಸ್ ಅಧ್ಯಕ್ಷರ ವಿಮಾನದಲ್ಲೇ ಎಮ್ಯಾನುಯಲ್ ಮ್ಯಾಕ್ರಾನ್ ಮತ್ತು ಪ್ರಧಾನಿ ನರೇಂದ್ರ ಮೋದಿ, ಜಂಟಿಯಾಗಿ ಪ್ರಯಾಣಿಸಿದರು. ಇದು ಪರಸ್ಪರ ವಿಶ್ವಾಸವನ್ನು ಸಂಕೇತಿಸುತ್ತಿವೆ ಎಂದು ವಿಕ್ರಮ್ ಮಿಸ್ರಿ ತಿಳಿಸಿದ್ದಾರೆ. ವಿಮಾನ ಪ್ರಯಾಣದ ಸಮಯದಲ್ಲೂ ಕೂಡ ತಂತ್ರಜ್ಞಾನ, ನಾವೀನ್ಯತೆ, ಸ್ಟಾರ್ಟ್‌ಅಪ್ ಸೇರಿದಂತೆ ಹಲವು ವಿಷಯಗಳ ಕುರಿತು ಉಭಯ ನಾಯಕರು ಚರ್ಚೆ ನಡೆಸಿದರು ಎಂದು ಅವರು ಮಾಹಿತಿ ನೀಡಿದ್ದಾರೆ.

**ಧ್ವನಿ : ವಿಕ್ರಮ್ ಮಿಸ್ರಿ (೨೦ ಸೆಕೆಂಡ್ಸ್)**

<><><><>

ಇಂದು ಸಮಾಜ ಸುಧಾರಕ ದಯಾನಂದ ಸರಸ್ವತಿ ಅವರ ಜನ್ಮದಿನ. ಈ ಹಿನ್ನೆಲೆಯಲ್ಲಿ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಗೌರವ ಸಲ್ಲಿಸಿದ್ದಾರೆ. ಸಾಮಾಜಿಕ ಪೋಸ್ಟ್‌ನಲ್ಲಿ ಅವರು, ಮಹಾನ್ ಚಿಂತಕ, ಸಮಾಜ ಸುಧಾರಕ, ರಾಷ್ಟ್ರೀಯವಾದಿ, ಮಹರ್ಷಿ ದಯಾನಂದ ಸರಸ್ವತಿ ಅವರಿಗೆ ಗೌರವ ನಮನ. ಅವರು, ತಮ್ಮ ಜೀವನದುದ್ದಕ್ಕೂ ಅಜ್ಞಾನ, ಮೂಡನಂಬಿಕೆ ಮತ್ತು ಆಡಂಬರದ ಬಗ್ಗೆ ಸಮಾಜಕ್ಕೆ ಅರಿವು ಮೂಡಿಸುವಲ್ಲಿ ತೊಡಗಿಸಿಕೊಂಡಿದ್ದರು. ಶಿಕ್ಷಣ, ಮಹಿಳಾ ಸಬಲೀಕರಣ, ಭಾರತೀಯ ಪರಂಪರೆ ಮತ್ತು ಸಂರಕ್ಷಣೆಗಾಗಿ ಮಹರ್ಷಿ ದಯಾನಂದ ಸರಸ್ವತಿಯವರ ಪ್ರಯತ್ನಗಳು ಸದಾ ದೇಶವಾಸಿಗಳಿಗೆ ಸ್ಫೂರ್ತಿ ನೀಡುತ್ತದೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

<><><><>

ಮಾಲ್ದೀವ್ಸ್ ಸಂಸತ್‌ನ ಸ್ಪೀಕರ್ ಅಬ್ದುಲ್ ರಹೀಂ ಅಬ್ದುಲ್ಲಾ ನೇತೃತ್ವದ ಮಾಲ್ದೀವ್ಸ್‌ನ ಸಂಸದೀಯ ನಿಯೋಗವು ನವದೆಹಲಿಯಲ್ಲಿಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿತು. ಭಾರತ ಮತ್ತು ಮಾಲ್ದೀವ್ಸ್ ನಡುವಿನ ದ್ವಿಪಕ್ಷೀಯ ಸಂಬಂಧದ ವಿವಿಧ

ಅಂಶಗಳ ಕುರಿತು ಸಭೆಯಲ್ಲಿ ಚರ್ಚೆ ನಡೆಯಿತು. ಎರಡೂ ರಾಷ್ಟ್ರಗಳ ನಡುವಿನ ಜನರಿಂದ ಜನರ ನಡುವಿನ ಸಂಪರ್ಕದ ಕುರಿತು ಇದೇ ವೇಳೆ ಚರ್ಚೆ ನಡೆಸಲಾಯಿತು.

<><><><>

ಪ್ರಯಾಗರಾಜ್‌ನ ಮಹಾಕುಂಭದ ಮಾಘ ಪೂರ್ಣಿಮಾ ಸ್ನಾನದ ವಿಶೇಷ ದಿನವಾದ ಇಂದು, ಮಧ್ಯಾಹ್ನದವರೆಗೆ ಒಂದು ಕೋಟಿ ೫೯ ಲಕ್ಷಕ್ಕೂ ಹೆಚ್ಚು ಭಕ್ತರು ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದ್ದಾರೆ. ಮಾಘ ಪೂರ್ಣಿಮೆಯ ಸಮಯದಲ್ಲಿ ಗಂಗಾ, ಯಮುನಾ ಮತ್ತು ಸರಸ್ವತಿ ಸಂಗಮದಲ್ಲಿ ಸ್ನಾನ ಮಾಡುವುದು ಶುಭವೆಂದು ಪರಿಗಣಿಸಲಾಗಿರುವುದರಿಂದ ಇದು ಹೆಚ್ಚಿನ ಪ್ರಾಮುಖ್ಯತೆಯನ್ನು ಹೊಂದಿದೆ. ಇಲ್ಲಿಯವರೆಗೆ ಮಹಾಕುಂಭ ಮೇಳದಲ್ಲಿ ಸುಮಾರು ೪೭ ಕೋಟಿ ೫೫ ಲಕ್ಷಕ್ಕೂ ಹೆಚ್ಚು ಭಕ್ತರು ಪವಿತ್ರ ಸ್ನಾನ ಮಾಡಿದ್ದಾರೆ. ವಿಶ್ವದ ಅತಿದೊಡ್ಡ ಧಾರ್ಮಿಕ ಸಭೆ ಎಂದು ಗುರುತಿಸಲ್ಪಟ್ಟ ಈ ಮಹಾಕುಂಭಮೇಳವು, ಜನವರಿ ೧೩ ರಂದು ಪ್ರಾರಂಭವಾಗಿ ಪ್ರಪಂಚದಾದ್ಯಂತದ ಭಕ್ತರನ್ನು ಆಹ್ವಾನಿಸುತ್ತಿದೆ.

<><><><>

ಭಾರತದ ಅತಿದೊಡ್ಡ ಜಾಗತಿಕ ಜವಳಿ ಸಮಾವೇಶವ 'ಭಾರತ್ ಟೆಕ್ಸ್-೨೦೨೫'ಕ್ಕೆ ಉತ್ತರ ಪ್ರದೇಶದ ಗ್ರೇಟರ್ ನೋಯ್ಡಾದಲ್ಲಿಂದು ಕೇಂದ್ರ ಜವಳಿ ಸಚಿವ ಗಿರಿರಾಜ್ ಸಿಂಗ್ ಚಾಲನೆ ನೀಡಿದ್ದಾರೆ. ಉದ್ಘಾಟನಾ ಸಮಾವೇಶವ ಉದ್ದೇಶಿಸಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ 'ಭಾರತ್ ಟೆಕ್ಸ್', ೬ ಸಾವಿರಕ್ಕೂ ಹೆಚ್ಚಿನ ಖರೀದಿದಾರರನ್ನು ಆಕರ್ಷಿಸಿದೆ. ಜವಳಿ ಮಾರುಕಟ್ಟೆಯು ೧೭೬ ಶತಕೋಟಿ ಡಾಲರ್‌ಗಳ ಮೌಲ್ಯದೊಂದಿಗೆ ಈಗ ಮುಂಚೂಣಿ ಉದ್ಯಮವಾಗಿ ಬೆಳೆದಿದೆ. ಅದರ ಮಾರುಕಟ್ಟೆ ಮೌಲ್ಯವನ್ನು ೩೫೦ ಶತಕೋಟಿ ಡಾಲರ್‌ಗೆ ಏರಿಸುವುದು ತಮ್ಮ ಗುರಿಯಾಗಿದೆ ಎಂದು ಹೇಳಿದರು. ಇಂದಿನಿಂದ ಆರಂಭವಾಗಿರುವ 'ಭಾರತ್ ಟೆಕ್ಸ್'ನ ೨ನೇ ಆವೃತ್ತಿ ನೋಯ್ಡಾದಲ್ಲಿ ಇದೇ ೧೫ರವರೆಗೆ ಹಾಗೂ ನವದೆಹಲಿಯ ಭಾರತ ಮಂಟಪಂನಲ್ಲಿ ಇದೇ ೧೪ ರಿಂದ ೧೭ರವರೆಗೆ ನಡೆಯಲಿದೆ. ಕಾರ್ಯಕ್ರಮದ ಭಾಗವಾಗಿ ೭೦ ದುಂಡುಮೇಜಿನ ಸಭೆಗಳು ಸೇರಿದಂತೆ ಸುಮಾರು ೧೦೦ ಅಂತಾರಾಷ್ಟ್ರೀಯ ಭಾಷಣಕಾರರ ನೇತೃತ್ವದಲ್ಲಿ ಚಿಂತನ-ಮಂಥನ ಆಯೋಜಿಸಲಾಗಿದೆ.

<><><><>

೨೦೫೦ರ ವೇಳೆಗೆ ಜಾಗತಿಕ ಇಂಧನ ಬಳಕೆಯಲ್ಲಿ ಭಾರತದ ಪಾಲು ದ್ವಿಗುಣಗೊಳ್ಳುವ ನಿರೀಕ್ಷೆಯಿದೆ. ಇದು ಇಂಧನ ವಹಿವಾಟಿನಲ್ಲಿ ಅದರ ಕಾರ್ಯತಂತ್ರದ ಪ್ರಭಾವವನ್ನು ಬಲಪಡಿಸುತ್ತದೆ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಹೇಳಿದ್ದಾರೆ. ಜಾಗತಿಕ ಇಂಧನ ಮಾರುಕಟ್ಟೆಯಲ್ಲಿ ಭಾರತ ಪ್ರಮುಖ ಸ್ಥಾನ ಹೊಂದಿದೆ. ವಿಶ್ವದ ಜನಸಂಖ್ಯೆಯ ಶೇಕಡ ೧೮ ರಷ್ಟು ಜನಸಂಖ್ಯೆಯನ್ನು ಹೊಂದಿರುವ ಭಾರತವು ಮೂರನೇ ಅತಿದೊಡ್ಡ ತೈಲ ಗ್ರಾಹಕ ಮತ್ತು ನಾಲ್ಕನೇ ಅತಿದೊಡ್ಡ ಎಲ್‌ಎನ್‌ಜಿ ಆಮದುದಾರ ದೇಶವಾಗಿದೆ. ೨೧ ನೇ ಶತಮಾನದ ಭವಿಷ್ಯವನ್ನು ನಿರ್ಧರಿಸುವಲ್ಲಿ ನೂತನ ಇಂಧನ ನೀತಿ ರೂಪಿಸುವ ಕಾರ್ಯವು ನಿರ್ಣಾಯಕವಾಗಿರುತ್ತದೆ ಎಂದು ಅವರು ಹೇಳಿದರು. ನವದೆಹಲಿಯಲ್ಲಿ ನಡೆಯುತ್ತಿರುವ ಭಾರತ ಇಂಧನ ಸಪ್ತಾಹದ ಸಂದರ್ಭದಲ್ಲಿ, ಇಂಧನ ಸಂಗ್ರಹಣೆ, ಸ್ಮಾರ್ಟ್ ಗ್ರಿಡ್‌ಗಳು ಸೇರಿದಂತೆ ಮೂಲಸೌಕರ್ಯದಲ್ಲಿ ಗಮನಾರ್ಹ ಹೂಡಿಕೆಗಳ ಅಗತ್ಯತೆಯ ಬಗ್ಗೆ ಸಚಿವರು, ಇಂದು ಸರಣಿ ಸಭೆಗಳಲ್ಲಿ ಭಾಗವಹಿಸಿ, ಪಾಲುದಾರರೊಂದಿಗೆ ಚರ್ಚಿಸಿದರು.

<><><>

೨೦೨೭ ರ ವೇಳೆಗೆ ಭಾರತ ವಿಶ್ವದ ೩ನೇ ಅತಿದೊಡ್ಡ ಆರ್ಥಿಕತೆಯಾಗಲಿದೆ ಎಂದು ಕೇಂದ್ರ ಬಂದರು, ಹಡಗು ಮತ್ತು ಜಲಮಾರ್ಗ ಸಚಿವ ಸರ್ಬಾನಂದ ಸೋನವಾಲ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ೨೦೨೫-೨೬ರ ಕೇಂದ್ರ ಬಜೆಟ್ ಕುರಿತು ತ್ರಿಪುರದ ಅಗರ್ತಲಾದಲ್ಲಿ ಇಂದು ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕೇಂದ್ರ ಸರ್ಕಾರ ಅಳವಡಿಸಿಕೊಂಡಿರುವ ನೀತಿಗಳು ಮತ್ತು ಕಾರ್ಯಕ್ರಮಗಳು ದೇಶದ ಜನರ ಸಾಮಾಜಿಕ, ಆರ್ಥಿಕ ಮಟ್ಟವನ್ನು ಉತ್ತಮಗೊಳಿಸಿದೆ ಎಂದು ಹೇಳಿದರು. ಉತ್ತಮ ಆಡಳಿತವು ಜನರು ಘನತೆಯಿಂದ ಬದುಕಲು ಅನುವು ಮಾಡಿಕೊಟ್ಟಿದೆ. ಮೊದಲ ಬಾರಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮಹಿಳಾ ಉದ್ಯಮಿಗಳು ೨ ಕೋಟಿ ರೂಪಾಯಿಗಳವರೆಗೆ ಸಾಲ ಪಡೆಯಲಿದ್ದಾರೆ ಎಂದು ಅವರು ಮಾಹಿತಿ ನೀಡಿದರು. ಎಂಎಸ್‌ಎಂಇ ಅಡಿಯಲ್ಲಿ ಕ್ರೆಡಿಟ್ ಗ್ಯಾರಂಟಿಯನ್ನು ೫ ಕೋಟಿಯಿಂದ ೧೦ ಕೋಟಿ ರೂಪಾಯಿಗೆ ಹೆಚ್ಚಿಸಲಾಗಿದೆ. ಈ ವಲಯವು ೨೦ ಕೋಟಿ ಜನರಿಗೆ ಉದ್ಯೋಗಗಳನ್ನು ಒದಗಿಸಿದೆ ಎಂದು ಹೇಳಿದರು. ವಾರ್ಷಿಕ ೧೨ ಲಕ್ಷ ರೂಪಾಯಿವರೆಗಿನ ವೇತನ ಪಡೆಯುವ ಜನರು, ಯಾವುದೇ ತೆರಿಗೆಯನ್ನು ಪಾವತಿಸಬೇಕಾಗಿಲ್ಲ.

ಇದರಿಂದ ೫ ಕೋಟಿ ೬೫ ಲಕ್ಷ ಜನರಿಗೆ ಪ್ರಯೋಜನವಾಗಲಿದೆ. ಇದೇ ವೇಳೆ ೩.೩ ಲಕ್ಷ ಜನರ ಬಳಕೆಯ ಸಾಮರ್ಥ್ಯ ಹೆಚ್ಚಾಗಿದೆ. ಸುಮಾರು ೨೫ ಕೋಟಿ ಜನರನ್ನು ಬಡತನ ರೇಖೆಯಿಂದ ಮುಕ್ತಗೊಳಿಸಲಾಗಿದೆ ಎಂದು ಸಚಿವ ಸರ್ಬಾನಂದ್ ಸೋನವಾಲ್ ಮಾಹಿತಿ ನೀಡಿದರು.

<><><><>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ೩ ಪಂದ್ಯಗಳ ಏಕದಿನ ಸರಣಿಯ ಅಂತಿಮ ಪಂದ್ಯದಲ್ಲಿ ಭಾರತ ಮತ್ತು ಇಂಗ್ಲೆಂಡ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಭಾರತ ನಿಗದಿತ ೫೦ ಓವರ್‌ಗಳಲ್ಲಿ ಎಲ್ಲಾ ವಿಕೆಟ್ ಕಳೆದುಕೊಂಡು ೩೫೬ ರನ್ ಗಳಿಸಿದೆ. ೩೫೭ ರನ್‌ಗಳ ಗುರಿ ಬೆನ್ನತ್ತಿರುವ ಇಂಗ್ಲೆಂಡ್ ತಂಡ ಇತ್ತೀಚಿನ ವರದಿ ಬಂದಾಗ ೨೬.೨ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೬೦ ರನ್ ಗಳಿಸಿ ಆಡುತ್ತಿದೆ. ಈಗಾಗಲೇ ಸರಣಿಯನ್ನು ೨-೦ ಮುನ್ನಡೆಯೊಂದಿಗೆ ಗೆದ್ದಿರುವ ಆತಿಥೇಯ ಭಾರತ, ಇಂದಿನ ಪಂದ್ಯವನ್ನು ಸಹ ಗೆದ್ದು ಸರಣಿಯನ್ನು ಕ್ಲೀನ್ ಸ್ವೀಪ್ ಮಾಡುವ ಗುರಿಯನ್ನು ಹೊಂದಿದೆ.

<><><><>

ಉತ್ತರಾಖಂಡದ ಡೆಹ್ರಾಡೂನ್‌ನಲ್ಲಿ ನಡೆಯುತ್ತಿರುವ ೩೮ನೇ ರಾಷ್ಟ್ರೀಯ ಕ್ರೀಡಾಕೂಟದ ಸ್ಪರ್ಧೆಯಲ್ಲಿ ಜಮ್ಮು ಮತ್ತು ಕಾಶ್ಮೀರದ ಮುಸ್ಕಾನ್ ರಾಣಾ ಚಿನ್ನದ ಪದಕ ವಿಜೇತರಾಗಿದ್ದಾರೆ. ೧೫ ವರ್ಷದ ಮುಸ್ಕಾನ್ ರಾಣಾ, ಜಮ್ಮು ಮತ್ತು ಕಾಶ್ಮೀರ ಕ್ರೀಡಾ ಮಂಡಳಿಯ ಜಿಮ್ನಾಸ್ಟಿಕ್ ಅಕಾಡೆಮಿಯಲ್ಲಿ ತರಬೇತಿ ಪಡೆದಿದ್ದಾರೆ. ಪುರುಷರ ಹಾಕಿ ಸ್ಪರ್ಧೆಯ ಸೆಮಿಫೈನಲ್ ಪಂದ್ಯದಲ್ಲಿ ಪಂಜಾಬ್ ವಿರುದ್ಧ ೫-೩ ಗೋಲುಗಳಿಂದ ಉತ್ತರಪ್ರದೇಶ ಜಯಗಳಿಸಿದ್ದು, ಫೈನಲ್ ಪ್ರವೇಶಿಸಿದೆ. ನಾಳೆ ನಡೆಯಲಿರುವ ಫೈನಲ್ ಪಂದ್ಯದಲ್ಲಿ ಕರ್ನಾಟಕ ಮತ್ತು ಉತ್ತರಪ್ರದೇಶ ಮುಖಾಮುಖಿಯಾಗಲಿವೆ. ೪x೪೦೦ ರಿಲೆ ಸ್ಪರ್ಧೆಯಲ್ಲಿ ಕೇರಳ ತಂಡ ಚಿನ್ನ, ಮಹಾರಾಷ್ಟ್ರ ಬೆಳ್ಳಿ ಮತ್ತು ಪಂಜಾಬ್ ಕಂಚಿನ ಪದಕ ಗೆದ್ದಿದೆ. ಪುರುಷರ ೫ ಸಾವಿರ ಮೀಟರ್ ಓಟದ ಸ್ಪರ್ಧೆಯಲ್ಲಿ ಹಿಮಾಚಲ ಪ್ರದೇಶದ ಸಾವನ್ ಬರ್ವಲ್ ಚಿನ್ನ, ಹರಿಯಾಣದ ಗಗನ್ ಸಿಂಗ್ ಬೆಳ್ಳಿ ಮತ್ತು ಮಧ್ಯಪ್ರದೇಶದ ಸುನೀಲ್ ದವಾರ್ ಕಂಚಿನ ಪದಕ ವಿಜೇತರಾಗಿದ್ದಾರೆ. ಮಹಿಳೆಯರ ೫ ಸಾವಿರ ಮೀಟರ್ ಓಟದ ಸ್ಪರ್ಧೆಯಲ್ಲಿ ಉತ್ತರಾಖಂಡದ ಅಂಕಿತ ಚಿನ್ನ, ಮಹಾರಾಷ್ಟ್ರದ ಸಂಜೀವಿನಿ ಜಾಧವ್ ಬೆಳ್ಳಿ, ಮಹಾರಾಷ್ಟ್ರದವರೇ ಆದ ಪುನಮ್ ಸೊನುನೆ ಕಂಚಿನ ಪದಕ ಗೆದ್ದಿದ್ದಾರೆ. ಪುರುಷರ ಜಾವಲಿನ್ ಎಸೆತದಲ್ಲಿ ಉತ್ತರಪ್ರದೇಶದ ಸಚಿನ್ ಯಾದವ್ ಚಿನ್ನ,

ಉತ್ತರಪ್ರದೇಶದವರೇ ಆದ ರೋಹಿತ್ ಯಾದವ್ ಬೆಳ್ಳಿ ಮತ್ತು ಉತ್ತರಾಖಂಡದ ವಿಕಾಸ್ ಶರ್ಮ ಕಂಚಿನ ಪದಕ ವಿಜೇತರಾಗಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>